ಊ) ಸದರಿ ಈ ಎರಡೂ ಹಗರಣಗಳ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು :

ಋ) ತನಿಖೆ ಈಗ ಯಾವ ಹಂತದಲ್ಲಿದೆ ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಕೆಲವು ಆರೋಪಗಳು ಸ್ವೀಕೃತವಾಗಿದ್ದು, ವಿಶ್ವವಿದ್ಯಾಲಯಗಳ ವರದಿಯಲ್ಲಿ ಅಕ್ರಮಗಳು ನಡೆದಿರುವ ಬಗ್ಗೆ ವರದಿಯಾಗಿಲ್ಲ.

ಆ) ವಿಶ್ವವಿದ್ಯಾಲಯದ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಮತ್ತು ಈ) ಮೇಲಿನ (ಅ) ಮತ್ತು (ಆ)ಗೆ ಉತ್ತರಿಸಿರುವ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಆರೋಪಗಳಲ್ಲಿ ಸೇರಿವೆ.

ಊ) ಮತ್ತು ಋ) ಇದು ಸರ್ಕಾರದ ಪರಿಶೀಲನೆಯಲ್ಲಿದೆ.

1161(1188) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ರಾಜ್ಯದಲ್ಲಿ ಸಿ.ಇ.ಟಿ. ಮುಖಾಂತರ ತಾಂತ್ರಿಕ ಕಾಲೇಜುಗಳಿಗೆ ಪ್ರವೇಶ ಪಡೆಯಲು ವಿದ್ಯಾರ್ಥಿಗಳಲ್ಲಿ ಇನ್ನೂ ಗೊಂದಲ ಮುಂದುವರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಆ) ಹಾಗಿದ್ದಲ್ಲಿ ಗೊಂದಲ ನಿವಾರಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು :

ಇ) ಇದಕ್ಕಾಗಿ ಕೇಂದ್ರಮಟ್ಟದಲ್ಲಿ ಶಾಸನ ರಚನೆ ಮಾಡಲು ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) 2004–05ನೇ ಸಾಲಿನ ವೃತ್ತಿಪರ ಕೋರ್ಸುಗಳ ಪ್ರವೇಶ ಪ್ರಕ್ರಿಯೆ ಮುಕ್ತಾಯಗೊಂಡು ತರಗತಿಗಳು ಈಗಾಗಲೇ ಪ್ರಾರಂಭಗೊಂಡಿವೆ.

2005–06ನೇ ಶೈಕ್ಷಣಿಕ ಸಾಲಿನಲ್ಲಿ ಈ ಗೊಂದಲವನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಈಗಾಗಲೇ ಈ ಬಗ್ಗೆ ಖಾಸಗೀ ಶಿಕ್ಷಣ ಸಂಸ್ಥೆಗಳೊಂದಿಗೆ ಸಮಾಲೋಚಿಸಲಾಗಿದ್ದು ಸೂಕ್ತ ಪರಿಹಾರ ಕಂಡುಕೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.

ಇ) ಕೇಂದ್ರೀಯ ಶಾಸನವನ್ನು ರಚಿಸುವಂತೆ ಕೋರಿ ರಾಜ್ಯ ಸರ್ಕಾರದಿಂದ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ.

1162 (1189) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಹುಬ್ಬಳ್ಳಿ ಮಹಾನಗರದ ಕಿಮ್ಸ್ ಸಂಸ್ಥೆ ಅವ್ಯವಸ್ಥೆಯ ಆಗರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಆ) ಬಂದಿದ್ದಲ್ಲಿ ಇದರ ಸುಧಾರಣೆಗೆ ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಇಕ್ಬಾಲ್ ಅನ್ಸಾರಿ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಮತ್ತು ಆ) ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು ಒಂದು ಸ್ವಾಯತ್ತ ಸಂಸ್ಥೆಯಾಗಿದೆ. ಅದರಲ್ಲಿ ಯಾವುದೇ ಅವ್ಯವಸ್ಥೆ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ

ಆದಾಗ್ಯೂ ಈಗಾಗಲೇ ಸಂಸ್ಥೆಯ ಮತ್ತು ಆಸ್ಪತ್ರೆಯ ಅಭಿವೃದ್ಧಿ ಸಲುವಾಗಿ ಎಂ.ಸಿ.ಐ. ಮಾನದಂಡನೆ ಪ್ರಕಾರ ಎಂ.ಬಿ.ಬಿ.ಎಸ್. ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಬೋಧಕ ಹಾಗೂ ಇನ್ನಿತರ ಸಿಬ್ಬಂದಿಗಳ ನೇಮಕ, ಅವಶ್ಯಕವಾಗಿ ಬೇಕಾದ ಸಾಧನ ಸಲಕರಣೆಗಳ ಅಳವಡಿಕೆ, ಐ.ಸಿ.ಯು., ಐ.ಸಿ.ಸಿ.ಯು, ಡಯಾಲಿಸಸ್ ವಿಭಾಗ ಸ್ಥಾಪನೆ ಈ ರೀತಿ ಹಲವಾರು ಸುಧಾರಣೆ ಕ್ರಮಗಳನ್ನು ಕೈಗೊಳ್ಳಲಾಗಿದೆ.

1163 (1) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಸಿ.ಇ.ಟಿ. ಪರೀಕ್ಷೆಯಲ್ಲಿ ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಎರಡೂ ವಿಷಯಗಳಲ್ಲೂ ಅರ್ಹತೆ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

ಆ) ಎರಡೂ ವಿಭಾಗಗಳಲ್ಲೂ ಅರ್ಹತೆ ಪಡೆದು ಒಂದನ್ನು ಆಯ್ಕೆ ಮಾಡಿದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

ಇ) ಕಾಲೇಜು ಆಡಳಿತ ಮಂಡಳಿಯ ಒತ್ತಾಯದಿಂದ ಕೆಲವು ವಿದ್ಯಾರ್ಥಿಗಳು ಮೆಡಿಕಲ್ ಸೀಟನ್ನು ಬಿಟ್ಟು ಇಂಜಿನಿಯರಿಂಗ್ ಆಯ್ಕೆ ಮಾಡಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೆ :

ಈ) ಇಂತಹ ಸೀಟು ಹಂಚಿಕೆಯಲ್ಲಿ ಸರ್ಕಾರ ಅನುಸರಿಸಿದ ಮಾನದಂಡ ಏನು ;

ಉ) ಭರ್ತಿಯಾಗದೇ ಉಳಿಕೆಯಾದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಸೀಟುಗಳ ಸಂಖ್ಯೆ ಎಷ್ಟು ; ಕಾಲೇಜುವಾರು ಹಾಗೂ ವಿಭಾಗಗಳ ವಿವರಗಳನ್ನು ನೀಡುವುದು ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಸಿ.ಇ.ಟಿ. ಪರೀಕ್ಷೆಯಲ್ಲಿ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಎರಡೂ ವಿಷಯಗಳಲ್ಲೂ ಒಟ್ಟು 36514 ಅಭ್ಯರ್ಥಿಗಳು ಅರ್ಹತೆ ಪಡೆದಿರುತ್ತಾರೆ.

ಆ) ಎರಡೂ ವಿಭಾಗಗಳಲ್ಲೂ ಅರ್ಹತೆ ಪಡೆದು ಒಂದನ್ನು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ವಿವರ ಈ ಕೆಳಕಂಡಂತಿದೆ.

ವೈದ್ಯಕೀಯ – 3561

ಇಂಜಿನಿಯರಿಂಗ್ – 17167

ಇ) ಇಂತಹ ಯಾವುದೇ ಪ್ರಕರಣ ಗಮನಕ್ಕೆ ಬಂದಿರುವುದಿಲ್ಲ.

ಈ) ಇಂತಹ ಯಾವುದೇ ಪ್ರಕರಣ ಗಮನಕ್ಕೆ ಬಾರದೇ ಇರುವುದರಿಂದ ಸೀಟುಗಳನ್ನು ಮರು ಹಂಚಿಕೆ ಮಾಡಿರುವುದಿಲ್ಲ.

ಉ) ಭರ್ತಿಯಾಗದೇ ಉಳಿದ ಸರ್ಕಾರಿ ಕೋಟಾ ಇಂಜಿನಿಯರಿಂಗ್ ಹಾಗು ವೈದ್ಯಕೀಯ ಸೀಟುಗಳ ವಿವರ ಈ ಕೆಳಕಂಡಂತೆ ಇದೆ.

ವೈದ್ಯಕೀಯ : ---

ದಂತ ವೈದ್ಯಕೀಯ : 220

ಇಂಜಿನಿಯರಿಂಗ್ : 9228

ಕಾಲೇಜುವಾರು ಹಾಗೂ ವಿಭಾಗವಾರು ವಿವರದ ತಃಖ್ತೆ ಲಗತ್ತಿಸಿದೆ.

S.